## ಅಧ್ಯಕ್ಷರು, ಕಿರಿಯ ಇಂಜಿನಿಯರ್(ಬ್ಯಾಕ್‌ಲಾಗ್)ಗಳ ನೇಮಕಾತಿ ಪ್ರಾಧಿಕಾರ ಮತ್ತು ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು(ದ), ಕೆ.ಆರ್.ವೃತ್ತ ಬೆಂಗಳೂರು.

ಸಂಖ್ಯೆ/ಸಿಬಿಎಸ್/106/ಕಿಇಂ/ಬ್ಯಾಕ್‌ಲಾಗ್/ಇಎಸ್ಇ/2015–16 ದಿನಾಂಕ **01.02.2016**

# ಅಧಿಸೂಚನೆ

ಲೋಕೋಪಯೋಗಿ, ಜಲಸಂಪನ್ಮೂಲ ಮತ್ತು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗಳಲ್ಲಿ ಗುರುತಿಸಲ್ಪಟ್ಟ ಒಟ್ಟು 1347 ಬ್ಯಾಕ್‌ಲಾಗ್ ಇಂಜಿನಿಯರ್‌ಗಳ(846 ಸಹಾಯಕ ಇಂಜಿನಿಯರ್(ಸಿವಿಲ್/ ಮೆಕ್ಯಾನಿಕಲ್), 501 ಕಿರಿಯ ಇಂಜಿನಿಯರ್(ಸಿವಿಲ್/ಮೆಕ್ಯಾನಿಕಲ್)) ಹುದ್ದೆಗಳನ್ನು ಈ ಹಿಂದೆ ಗುತ್ತಿಗೆ ಆಧಾರದ ಮೇರೆಗೆ ನೇಮಕಾತಿ ಮಾಡಿ ನಂತರ 476 ಕಿರಿಯ ಇಂಜಿನಿಯರ್ ಮತ್ತು 803 ಸಹಾಯಕ ಇಂಜಿನಿಯರ್‌ಗಳ ಗುತ್ತಿಗೆ ಸೇವೆಯನ್ನು **The Karnataka Civil Services (Absorption of persons appointed on contract basis against backlog vacancies in the category of Assistant Engineers and Junior Engineers in the Department of Public Works Engineering, Water Resources and Rural Development and Panchayath Raj) (Special) Rules, 2005**ರ ವಿಶೇಷ ನಿಯಮಾವಳಿಯಡಿ ವಿಲೀನಗೊಳಿಸಲಾಗಿತ್ತು. ಸದರಿ ವಿಶೇಷ ನಿಯಮಾವಳಿಯನ್ನು ಪ್ರಶ್ನಿಸಿ ಮಾನ್ಯ ಸರ್ವೋಚ್ಛ ನ್ಯಾಯಾಲಯದಲ್ಲಿ ಬಾಕಿಇದ್ದ ಎಸ್.ಎಲ್.ಪಿ.ಸಂಖ್ಯೆ 1916-3582/2013 ಮತ್ತು ಸಿವಿಲ್ ಅಪೀಲ್ ಸಂಖ್ಯೆ 9337-9352/2015ರ- ಪ್ರಕರಣದಲ್ಲಿ ಮಾನ್ಯ ಸರ್ವೋಚ್ಛ ನ್ಯಾಯಾಲಯವು ದಿನಾಂಕ 04-11-2015ರಂದು ನೀಡಿರುತ್ತದೆ.

ಮಾನ್ಯ ಸರ್ವೋಚ್ಛ ನ್ಯಾಯಾಲಯದ ದಿನಾಂಕ 04-11-2015ರ ತೀರ್ಪಿನಲ್ಲಿ ಬ್ಯಾಕ್‌ಲಾಗ್ ಇಂಜಿನಿಯರ್‌ಗಳ ಹುದ್ದೆಗಳನ್ನು ಭರ್ತಿ ಮಾಡುವ ಸಂಬಂಧ ಮಾನ್ಯ ಉಚ್ಛ ನ್ಯಾಯಾಲಯವು ಅರ್ಜಿ ಸಂಖ್ಯೆ 15955-16115/2009, 23707/2009 ಹಾಗೂ ಇತರೆ ಪ್ರಕರಣಗಳಲ್ಲಿ ದಿನಾಂಕ 13-07-2012ರಂದು ನೀಡಿದ ತೀರ್ಪಿನ ಸಾರಾಂಶವನ್ನು ಎತ್ತಿ ಹಿಡಿದಿರುತ್ತದೆ. ಮುಂದುವರೆದು,ದಿನಾಂಕ 4-11-2015ರಂದು ನೀಡಿರುವ ತೀರ್ಪಿನಲ್ಲಿ ಆಯ್ಕೆ ಪ್ರಕ್ರಿಯೆಯನ್ನು ಕೈಗೊಂಡು ಅಭ್ಯರ್ಥಿಗಳಿಗೆ ನಿಗದಿಪಡಿಸಬೇಕಾದ ಜೇಷ್ಠತೆ ಹಾಗೂ ಇತರೆ ಸವಲತ್ತುಗಳನ್ನು ನೀಡುವ ಕುರಿತು ನಿರ್ದೇಶನ ನೀಡಿರುತ್ತದೆ.

ಮಾನ್ಯ ಉಚ್ಛ ನ್ಯಾಯಾಲಯದ ದಿನಾಂಕ 13-07-2012 ರ ತೀರ್ಪಿನ ಸಾರಾಂಶವನ್ನು ಮಾನ್ಯ ಸರ್ವೋಚ್ಛ ನ್ಯಾಯಾಲಯದ ದಿನಾಂಕ 04-11-2015ರ ತೀರ್ಪಿನ ಕಂಡಿಕೆ 6 ಉಲ್ಲೇಖಿಸಲಾಗಿದ್ದು, ಲೋಕೋಪಯೋಗಿ, ಜಲಸಂಪನ್ಮೂಲ ಮತ್ತು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಗಳಲ್ಲಿ ಗುರುತಿಸಲ್ಪಟ್ಟ 501 ಕಿರಿಯ ಇಂಜಿನಿಯರ್(ಸಿವಿಲ್/ಮೆಕ್ಯಾನಿಕಲ್) ಬ್ಯಾಕ್‌ಲಾಗ್ ಹುದ್ದೆಗಳ್ನು **The Karnataka Civil Services(Unfilled vacancies reserved for persons belonging to the Scheduled Castes and the Scheduled Tribes) (Special Recruitment) Rules2001** ನಿಯಾವಳಿಯ ಅನುಸಾರ ಭರ್ತಿ ಮಾಡಲು ಮಾನ್ಯ ಉಚ್ಛ ನ್ಯಾಯಾಲಯ ಹಾಗೂ ಮಾನ್ಯ ಸರ್ವೋಚ್ಛ ನ್ಯಾಯಾಲಯದ ಆದೇಶದಂತೆ ದಿನಾಂಕ 21-11-2001ರಂದು ನಿಯಮಗಳಲ್ಲಿ ನಿಗಧಿಪಡಿಸಿದ ವಿದ್ಯಾರ್ಹತೆ ಮತ್ತು ವಯೋಮಿತಿಯನ್ನು ಹೊಂದಿರುವ ಅರ್ಹ ಅಭ್ಯರ್ಥಿಗಳಿಂದ ಹಾಗೂ ಈಗಾಗಲೇ 2005ರ ವಿಶೇಷ ವಿಲೀನಾತಿ ನಿಯಮಾವಳಿಯಡಿ ವಿಲೀನಗೊಂಡು ಸೇವೆಯಲ್ಲಿರುವ ಎಲ್ಲಾ ಬ್ಯಾಕ್‌ಲಾಗ್ ಕಿರಿಯ ಇಂಜಿನಿಯರ್‌ಗಳಿಂದ ನೇಮಕಾತಿ ಪ್ರಾಧಿಕಾರವು ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ.

**1. ಅರ್ಜಿಗಳನ್ನು ಆನ್-ಲೈನ್–(ON -LINE) (ಎಲೆಕ್ಟ್ರಾನಿಕ್ ಮಾರ್ಗ) ಮುಖಾಂತರ ಮಾತ್ರ ಸಲ್ಲಿಸತಕ್ಕದ್ದು. ಅರ್ಜಿಗಳನ್ನು ಖುದ್ದಾಗಿ ಅಥವಾ ಅಂಚೆ ಮೂಲಕ ಪ್ರತ್ಯೇಕವಾಗಿ ಅವಕಾಶವಿರುವುದಿಲ್ಲ .**

1) ಅಭ್ಯರ್ಥಿಗಳು ಅರ್ಜಿಯನ್ನು (ON -LINE)ನಲ್ಲಿ ನೀಡಿರುವ ಸೂಚನೆಗಳನ್ವಯ ಭರ್ತಿ ಮಾಡತಕ್ಕದ್ದು
2) ಅಭ್ಯರ್ಥಿಗಳು ತಪ್ಪು ಮಾಹಿತಿಗಳನ್ನು ನೀಡಿ ಅರ್ಜಿ ಸಲ್ಲಿಸಿದಲ್ಲಿ ಅಂತಹವರ ವಿರುದ್ಧ ನೇಮಕಾತಿ ಪ್ರಾಧಿಕಾರವು ಕಾನೂನಿನನ್ವಯ ಸೂಕ್ತ ಕ್ರಮ ಕೈಗೊಳ್ಳುವುದು.

..2..

**ಅರ್ಜಿಯಲ್ಲಿ ಮೀಸಲಾತಿಗೆ ಸಂಬಂಧಿಸಿದ ಅಂಕಣದಲ್ಲಿ ಉಪಯೋಗಿಸಿದ ಪದಗಳ ಅರ್ಥವನ್ನು ಈ ಕೆಳಕಂಡಂತೆ ಅರ್ಥೈಸಿಕೊಳ್ಳಬೇಕು.**

**SC- Scheduled Caste**

**ST- Scheduled Tribe**

**Ex- MP-Ex-Military Person**

**RL- Rural candidate**

**PH – Physically Handicapped**

**PDP – Project Displaced Person**

**2.ಅಭ್ಯರ್ಥಿಗಳು ONLINE ಮೂಲಕ ಅರ್ಜಿ ~~ಭರ್ತಿ ಮಾಡುವ ಮೊದಲು~~ ಕೆಳಕಂಡ ಸೂಚನೆ ಕಡ್ಡಾಯವಾಗಿ ತಿಳಿದುಕೊಳ್ಳತಕ್ಕದ್ದು.**

ಅಭ್ಯರ್ಥಿಗಳು ನೇಮಕಾತಿ ಪ್ರಾಧಿಕಾರವು ಅಧಿಕೃತ ವೆಬ್‌ಸೈಟ್ **www.kpwd.gov.in** ಅನ್ನು ತೆರೆದ ಕೂಡಲೇ ಕಂಪ್ಯೂಟರ್ ಪರದೆಯ ಮೇಲೆ **'Application for Special Recruitment to the posts of junior Engineer (Civil / Mechanical) in Public Works, Water Resources and Rural Development and Panchayath Raj Engineering Department'** ಎಂದು ಮೂಡುತ್ತದೆ. ಆನ್‌ಲೈನ್ ಅರ್ಜಿಯನ್ನು ಭರ್ತಿ ಮಾಡುವ ಮುನ್ನ ಅಧಿಸೂಚನೆಯನ್ನು ಮತ್ತು ಸೂಚನೆಗಳನ್ನು ಕಡ್ಡಾಯವಾಗಿ ಓದತಕ್ಕದ್ದು ಮತ್ತು ಅಂತಿಮವಾಗಿ ನಿಯಮ ಮತ್ತು ಷರತ್ತುಗಳನ್ನು ಕೆಳಗಿನ ಚೆಕ್‌ಬಾಕ್ಸ್‌ನ್ನು ಒತ್ತುವ ಮೂಲಕ ಒಪ್ಪಿಕೊಳ್ಳತಕ್ಕದ್ದು ಮತ್ತು ನೀಡಿರುವ ಸೂಚನೆಗಳಂತೆ ಮುಂದುವರೆಯಬೇಕು.

ಹಂತ: –1: ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು **New Application Button** ಅನ್ನು ಒತ್ತಬೇಕು.

ಹಂತ 2: ಅಭ್ಯರ್ಥಿಗಳ ವೈಯುಕ್ತಿಕ ವಿವರಗಳು, ಸಂಪರ್ಕ ವಿವರಗಳು, ವಿದ್ಯಾರ್ಹತೆ, ಮೀಸಲಾತಿ ಮತ್ತು ಪ್ರವರ್ಗದ ವಿವರಗಳನ್ನು ನಮೂದಿಸಿ **preview Button** ಅನ್ನು ಒತ್ತಬೇಕು.

ಹಂತ 3: ಅರ್ಜಿಯಲ್ಲಿ ನಮೂದಿಸಿರುವ ವಿವರಗಳನ್ನು ಪರಿಶೀಲಿಸಿ ಬದಲಾವಣೆ ಏನಾದರೂ ಇದ್ದಲ್ಲಿ **Edit Button** ಅನ್ನು ಒತ್ತಿ ವಿವರಗಳನ್ನು ಮಾರ್ಪಾಡು ಮಾಡಬೇಕು. ಯಾವುದೇ ಬದಲಾವಣೆ ಇಲ್ಲವಾದಲ್ಲಿ **Photo Upload Button** ಅನ್ನು ಒತ್ತಿ ಮುಂದುವರೆಯುವುದು.

**ಹಂತ: –4 :** ಅಭ್ಯರ್ಥಿಯು ಸ್ಕ್ಯಾನ್ ಮಾಡಿದ **Passport size** ಭಾವಚಿತ್ರ / ಸಹಿ ಅಳತೆಯನ್ನು ಮಾಡುವ ಮುನ್ನ ಇರುವ ಸೂಚನೆಗಳನ್ನು ಓದಿಕೊಂಡು ಅದನ್ನು ಅನುಸರಿಸುವುದು. ಹಾಗೂ ಅಂತಿಮವಾಗಿ **Submit Button** ಒತ್ತುವ ಮೂಲಕ ಅರ್ಜಿ ಭರ್ತಿ ಮಾಡುವ ಪ್ರಕ್ರಿಯೆಯನ್ನು ಪೂರ್ಣಗೊಳಿಸುವುದು.

| | ಪಾಸ್ ಪೋರ್ಟ್ ಭಾವಚಿತ್ರ ಹಾಗೂ ಸಹಿ ಅಳತೆ |
|---|---|
| ಪಾಸ್ ಪೋರ್ಟ್ ಭಾವಚಿತ್ರ ಹಾಗೂ ಸಹಿ ಅಳತೆ | 35mm |
| File Size < 100 kb | |
| DPI Setting = 100 dpl | 45mm |
| Image Scale = 100% | |
| Color = True Color | |
| Type = JPEG/JPG | ¸ » |

**ಹಂತ –5 :** ಭರ್ತಿ ಮಾಡಿರುವ ಆನ್‌ಲೈನ್ ಅರ್ಜಿಯ ಪ್ರತಿಯನ್ನು ಮುದ್ರಿಸಿಕೊಳ್ಳಲು ಅಂತಿಮವಾಗಿ **Application Preview Button** ಅನ್ನು ಒತ್ತಿ ಅರ್ಜಿಯನ್ನು ಮುದ್ರಿಸಿಕೊಳ್ಳಬೇಕು ಹಾಗೂ ನೇಮಕಾತಿ ಪ್ರಾಧಿಕಾರವು ಅಪೇಕ್ಷಿಸಿದಾಗ ಈ ಪ್ರತಿಯನ್ನು ಹಾಜರುಪಡಿಸಬೇಕು.

**ಸೂಚನೆ : ಅಭ್ಯರ್ಥಿಯು– Application Preview Button ಅನ್ನು ಒತ್ತಿದ ನಂತರ ಅರ್ಜಿಯಲ್ಲಿ ಯಾವುದೇ ಮಾರ್ಪಾಡುಗಳನ್ನು ಮಾಡಲು ಸಾಧ್ಯವಾಗುವುದಿಲ್ಲ.**

**3.1 ಅಭ್ಯರ್ಥಿಗಳು ಅರ್ಜಿಯಲ್ಲಿ ತಮ್ಮ ಮಿಂಚಂಚೆ (ಇ-ಮೇಲ್) ವಿಳಾಸವನ್ನು ನಮೂದಿಸತಕ್ಕದ್ದು.**

**3.1 ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೆ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು.**

* ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ : **03–02–2016**

* ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ : **03–03–2016** [ರಾತ್ರಿ 11.45ರೊಳಗೆ]

**<u>ವಿಶೇಷ ಸೂಚನೆ:</u>**

**On-line** ಮೂಲಕ ಅರ್ಜಿಯನ್ನು ಭರ್ತಿ ಮಾಡುವ ಸಂದರ್ಭದಲ್ಲಿ ತಾಂತ್ರಿಕತೊಂದರೆ ಅಥವಾ ಸಮಸ್ಯೆ ಎದುರಾದಲ್ಲಿ ಸಹಾಯವಾಣಿ(**Helpline)** ______________ಅನ್ನು ಸಂಪರ್ಕಿಸಿ ಅಗತ್ಯ ಮಾಹಿತಿ ಪಡೆದು ಅರ್ಜಿ ಸಲ್ಲಿಸಬಹುದು.

**<u>ಅರ್ಹತಾ ಷರತ್ತುಗಳು:-</u>**

ಅ) ಭಾರತೀಯ ನಾಗರೀಕನಾಗಿರತಕ್ಕದ್ದು.

ಆ) ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತನಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಯಾವುದೇ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು.

ಇ) ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ರಾಜ್ಯ ಸರ್ಕಾರವು ಕಾಯ್ದಿರಿಸಿಕೊಂಡಿದೆ ಮತ್ತು ಸರ್ಕಾರದ ವಿವೇಚನೆಯು ಯಾವುದೇ ವಿಧದಲ್ಲೂ ಈ ನಿಯಮಾವಳಿಗಳ ಮೂಲಕ ಸೀಮಿತವಾಗಿರುವುದಿಲ್ಲ.

ನಿಗಧಿತ ಶೈಕ್ಷಣಿಕ ಅರ್ಹತೆಯ ಜೊತೆಗೆ ಈ ಮೇಲ್ಕಂಡ ಅರ್ಹತೆಗಳನ್ನು ಹೊಂದಿರುವ ಅಭ್ಯರ್ಥಿಗಳು ನೇಮಕಾತಿಗಾಗಿ ಅರ್ಜಿ ಸಲ್ಲಿಸಲು ಅರ್ಹತೆಯನ್ನು ಹೊಂದಿರುತ್ತಾರೆ.

**4. <u>ನೇಮಕಾತಿ ವಿಧಾನ:-</u>**

ಕರ್ನಾಟಕ ರಾಜ್ಯ ನಾಗರೀಕ ಸೇವೆಗಳು(ಪರಿಶಿಷ್ಟ ಜಾತಿ ಮತ್ತು ಪಂಗಡದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ತುಂಬದೇ ಇರುವ ಸ್ಥಾನಗಳು) (ವಿಶೇಷ ನೇಮಕಾತಿ)ನಿಯಮಗಳು 2001ರ ಅನ್ವಯ, ಆಯಾ ಹುದ್ದೆಗಳಿಗೆ ನಿಗದಿಪಡಿಸಿದ್ದ ವಿದ್ಯಾರ್ಹತೆಯಲ್ಲಿ ಅಭ್ಯರ್ಥಿಗಳು ಗಳಿಸಿದ್ದ ಒಟ್ಟು ಶೇಕಡಾವಾರನ್ನು ಆಧರಿಸಿ 18 ವರ್ಷದಿಂದ 28 ವರ್ಷ ವಯೋಮಿತಿಯುಳ್ಳ (29 ವರ್ಷ ವಯೋಮಿತಿಗಿಂತ ಕಡಿಮೆಯುಳ್ಳವರು)ಅಭ್ಯರ್ಥಿಗಳ ಒಂದು ಜ್ಯೇಷ್ಠತಾ ಪಟ್ಟಿಯನ್ನು ಹಾಗೂ 29 ವರ್ಷದಿಂದ 40 ವರ್ಷ ವಯೋಮಿತಿಯುಳ್ಳ ಅಭ್ಯರ್ಥಿಗಳ ಇನ್ನೊಂದು ಜ್ಯೇಷ್ಠತಾ ಪಟ್ಟಿಯನ್ನು ತಯಾರಿಸಿ ಇದರ ಆಧಾರದಂತೆ ಆಯ್ಕೆ ಮಾಡಲಾಗುವುದು. ಆಯ್ಕೆ ಮಾಡುವಾಗ 29 ವರ್ಷದಿಂದ 40 ವರ್ಷ ವಯೋಮಿತಿಯುಳ್ಳ ಅಭ್ಯರ್ಥಿಗಳ ಜ್ಯೇಷ್ಠತಾ ಪಟ್ಟಿಯಲ್ಲಿರುವವರಿಗೆ ಮೊದಲ ಆದ್ಯತೆ ನೀಡಲಾಗುವುದು.

**5.** <u>ಶೈಕ್ಷಣಿಕ ವಿದ್ಯಾರ್ಹತೆ, ವೇತನ ಶ್ರೇಣಿ, ವಯೋಮಿತಿ ವರ್ಗೀಕರಣ</u> ಮತ್ತು ಹುದ್ದೆಗಳ ವರ್ಗೀಕರಣ:–

**5.1** ಶೈಕ್ಷಣಿಕ ವಿದ್ಯಾರ್ಹತೆ:- ಮಾನ್ಯ ಸರ್ವೋಚ್ಛ ನ್ಯಾಯಾಲಯ / ಮಾನ್ಯ ಉಚ್ಛ ನ್ಯಾಯಾಲಯದ ಆದೇಶದಂತೆ ಕರ್ನಾಟಕ ರಾಜ್ಯ ನಾಗರೀಕ ಸೇವೆಗಳು(ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ತುಂಬದೇ ಇರುವ ಸ್ಥಾನಗಳು)(ವಿಶೇಷ ನೇಮಕಾತಿ) ನಿಯಮಗಳು 2001 ಜಾರಿಯಾದ ದಿನಾಂಕ 21-11-2001 ರಂದು ಇದ್ದಂತೆ ಈ ಕೆಳಕಂಡ ವಿದ್ಯಾರ್ಹತೆಯನ್ನು ಹೊಂದಿರುವ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ.

<u>ಕಿರಿಯ ಇಂಜಿನಿಯರುಗಳ ಸಿವಿಲ್ / ಮೆಕ್ಯಾನಿಕಲ್ ವಿದ್ಯಾರ್ಹತೆ</u>:-

Must be holder of a Diploma in Civil or Mechanical Engineering depending upon the requirements, as the case may be.

**5.2** <u>ವೇತನ ಶ್ರೇಣಿ:-</u>

ಕಿರಿಯ ಇಂಜಿನಿಯರುಗಳ ಸಿವಿಲ್ / ಮೆಕ್ಯಾನಿಕಲ್ : ರೂ.4575 – 8400

**5.3** ವಯೋಮಿತಿ:- ಮಾನ್ಯ ಸರ್ವೋಚ್ಛ ನ್ಯಾಯಾಲಯ / ಮಾನ್ಯ ಉಚ್ಛ ನ್ಯಾಯಾಲಯದ ಆದೇಶದಂತೆ ಕರ್ನಾಟಕ ರಾಜ್ಯ ನಾಗರೀಕ ಸೇವೆಗಳು(ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ತುಂಬದೇ ಇರುವ ಸ್ಥಾನಗಳು)(ವಿಶೇಷ ನೇಮಕಾತಿ) ನಿಯಮಗಳು 2001 ಜಾರಿಯಾದ ದಿನಾಂಕ 21-11-2001 ರಂದು ಇದ್ದಂತೆ ಈ ಕೆಳಕಂಡ ಕನಿಷ್ಠ ವಯೋಮಿತಿಯನ್ನು ಹೊಂದಿರಬೇಕು ಹಾಗೂ ನಿಗಧಿತ ಗರಿಷ್ಠ ವಯೋಮಿತಿಯನ್ನು ಮೀರಿರಬಾರದು. ನಿಯಮಗಳಲ್ಲಿ ವಯೋಮಿತಿ ಸಡಿಲಿಕೆಗೆ ಅವಕಾಶವಿರುವುದಿಲ್ಲ.

ಕನಿಷ್ಠ - 18 ವರ್ಷಗಳು
ಗರಿಷ್ಠ - 40 ವರ್ಷಗಳು

**5.4** <u>ಹುದ್ದೆಗಳ ವರ್ಗೀಕರಣ:–</u>

ಕಿರಿಯ ಇಂಜಿನಿಯರ್ (ಸಿವಿಲ್ ಇಂಜಿನಿಯರಿಂಗ್) - 451 ಹುದ್ದೆಗಳು

| ಮೀಸಲಾತಿ | ಇತರೆ | ಮ.ಅ | ಗ್ರಾ.ಅ | ಮಾಜಿ ಸೈನಿಕ | ಅಂ.ಅ | ಯೋ.ನಿ.ಅ | ಒಟ್ಟು |
|---|---|---|---|---|---|---|---|
| ಪ.ಜಾ | 100 | 120 | 100 | 40 | 20 | 20 | 400 |
| ಪ.ಪಂ | 14 | 15 | 13 | 05 | 02 | 02 | 51 |
| ಒಟ್ಟು | 114 | 135 | 113 | 45 | 22 | 22 | 451 |

ಮ.ಅ=**ಮಹಿಳಾ ಅಭ್ಯರ್ಥಿ**, ಗ್ರಾ.ಅ= **ಗ್ರಾಮೀಣ ಅಭ್ಯರ್ಥಿ**, ಅಂ.ಅ= **ಅಂಗವಿಕಲ ಅಭ್ಯರ್ಥಿ**, ಯೋ.ನಿ.ಅ=**ಯೋಜನೆ ನಿರ್ವಸಿತ ಅಭ್ಯರ್ಥಿ**

ಕಿರಿಯ ಇಂಜಿನಿಯರ್ (ಮೆಕ್ಯಾನಿಕಲ್ ಇಂಜಿನಿಯರಿಂಗ್) - 50 ಹುದ್ದೆಗಳು

| ಮೀಸಲಾತಿ | ಸಾಮಾನ್ಯ | ಮ.ಅ | ಗ್ರಾ.ಅ | ಮಾಜಿ ಸೈನಿಕ | ಅಂ.ಅ | ಯೋ.ನಿ.ಅ | ಒಟ್ಟು |
|---|---|---|---|---|---|---|---|
| ಪ.ಜಾ | 12 | 13 | 11 | 04 | 02 | 02 | 44 |
| ಪ.ಪಂ | 02 | 02 | 02 | - | - | - | 06 |
| ಒಟ್ಟು | 14 | 15 | 13 | 04 | 02 | 02 | 50 |

ಮಹಿಳೆಯರಿಗೆ / ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಮೀಸಲಿರಿಸಿದ ರಿಕ್ತ ಸ್ಥಾನಗಳಿಗೆ ಅರ್ಹ ಅಭ್ಯರ್ಥಿಗಳು ಲಭ್ಯವಾಗದಿದ್ದಲ್ಲಿ ಅಂತಹ ರಿಕ್ತಸ್ಥಾನಗಳನ್ನು ಆಯಾ ವರ್ಗಕ್ಕೆ ಸೇರಿದ ಇತರೆ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.

**6.** <u>ಜಾತಿ / ಮೀಸಲಾತಿ ಪ್ರಮಾಣ ಪತ್ರಗಳು</u> :–

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದೊಳಗೆ ನಮೂನೆ 'ಡಿ' ಅಥವಾ ಹಿಂದೆ ಪಡೆಯಲಾದ ಮೀಸಲಾತಿ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಳ್ಳಬೇಕು. ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಇದೇ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು. ಮೀಸಲಾತಿ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ. ಕೇಂದ್ರ ಸರ್ಕಾರದ ಅಥವಾ ಇತರೆ ರಾಜ್ಯ ಸರ್ಕಾರದ ನೇಮಕಾತಿಗಳಿಗಾಗಿ ಪಡೆಯಲಾದ ಮೀಸಲಾತಿ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ.

**7.** <u>ಗ್ರಾಮೀಣ ಅಭ್ಯರ್ಥಿ:–</u>

ಸರ್ಕಾರಿ ಅಧಿಸೂಚನೆ ಸಂಖ್ಯೆ ಸಂವ್ಯಶಾಇ 59 ಶಾಸನ 2000 ದಿನಾಂಕ 06-01-2001 ರನ್ವಯ ಗ್ರಾಮೀಣ ಮೀಸಲಾತಿಯಡಿ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು ನಿಯಮಗಳ ರೀತ್ಯಾ 1 ರಿಂದ 10ನೇ ತರಗತಿಯವರೆಗೆ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾದಲ್ಲಿ ಮಾತ್ರ ಈ ಮೀಸಲಾತಿಯನ್ನು ಪಡೆಯಲು ಅರ್ಹರು. ಗ್ರಾಮೀಣ ಅಭ್ಯರ್ಥಿ ಗಳಿಗೆಂದು ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನು ನಮೂನೆ-2ರಲ್ಲಿ ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ/ ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜು ಪಡೆದಿಟ್ಟುಕೊಂಡಿರತಕ್ಕದ್ದು. ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಇದೇ ಪ್ರಮಾಣ ಪತ್ರದ ಮೂಲ ಪ್ರತಿಗಳನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಗ್ರಾಮೀಣ ಮೀಸಲಾತಿಯನ್ನು ರದ್ದುಪಡಿಸಲಾಗುವುದು. (ಈ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ).

**8. <u>ಮಾಜಿ ಸೈನಿಕ ಮೀಸಲಾತಿಯ ವಿವರಣೆ:–</u>**

(1) ಮಾಜಿ ಸೈನಿಕ ಎಂದರೆ ಕೇಂದ್ರ ಸಶಸ್ತ್ರ ದಳಗಳಾದ ನಿಯಮಿತ ಭೂದಳ, ನೌಕಾದಳ ಮತ್ತು ವಾಯು ದಳದಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಯೋಧನಲ್ಲದ) ಸೇವೆ ಸಲ್ಲಿಸಿದ ವ್ಯಕ್ತಿ ಆದರೆ ಡಿಫೆನ್ಸ್ ಸೆಕ್ಯೂರಿಟಿ ಕೋರ್, ಜನರಲ್ ರಿಸರ್ವ್ ಇಂಜಿನಿಯರಿಂಗ್ ಫೋರ್ಸ್, ಲೋಕ ಸಹಾಯಕ ಸೇವೆ ಮತ್ತು ಪ್ಯಾರಾ ಮಿಲಿಟರಿ ದಳದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಸೇರ್ಪಡೆಯಾಗುವುದಿಲ್ಲ ಮತ್ತು

(2) ಕೇಂದ್ರ ಸಶಸ್ತ್ರ ದಳಗಳಲ್ಲಿ ಸೇವೆ ಸಲ್ಲಿಸುವಾಗ ಕೊಲ್ಲಲ್ಪಟ್ಟ ಅಥವಾ ಶಾಶ್ವತವಾಗಿ ದೈಹಿಕ ವಿಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು (ಸಂದರ್ಭಾನುಸಾರ ಹೆಂಡತಿ ಅಥವಾ ಗಂಡ ಮತ್ತು ಮಕ್ಕಳು ಮತ್ತು ಮಲ ಮಕ್ಕಳು) ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗಿರುತ್ತಾರೆ.

ಅ) ಅಂತಹ ಸೇವೆಯಿಂದ ನಿವೃತ್ತಿ ಹೊಂದಿದ ನಂತರ ನಿವೃತ್ತಿ ವೇತನ ಪಡೆಯುತ್ತಿರುವ

ಅಥವಾ

ಆ) ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಯಿಂದ ಬಿಡುಗಡೆಯಾದ ಅಥವಾ ವ್ಯಕ್ತಿಯ ಹಿಡಿತಕ್ಕೂ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಅಥವಾ ಅಸಾಮರ್ಥ್ಯದ ಪಿಂಚಣಿ ಪಡೆದು ಅಂತಹ ಸೇವೆಯಿಂದ ಬಿಡುಗಡೆಯಾದವನು

ಅಥವಾ

ಇ) ಸ್ವಂತ ಕೋರಿಕೆ ಹೊರತುಪಡಿಸಿ ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇವೆಯಿಂದ ಬಿಡುಗಡೆ ಹೊಂದಿದ ವ್ಯಕ್ತಿ.

ಅಥವಾ

ಈ) ತನ್ನ ಸ್ವಂತ ಕೋರಿಕೆ ಮೇರೆಗೆ ಅಥವಾ ದುರ್ನಡತೆ ಅಥವಾ ಅಸಾಮರ್ಥ್ಯದ ಕಾರಣದಿಂದಾಗಿ ತೆಗೆದುಹಾಕಿರುವ ಅಥವಾ ಕರ್ತವ್ಯದಿಂದ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ, ನಿರ್ದಿಷ್ಟ ಅವಧಿಯನ್ನು ಪೂರೈಸಿದ ತರುವಾಯ ಬಿಡುಗಡೆ ಹೊಂದಿದ ವ್ಯಕ್ತಿ ಮತ್ತು ಗ್ರಾಚ್ಯುಟಿ ಪಡೆಯುತ್ತಿರುವ ವ್ಯಕ್ತಿ ಮತ್ತು ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿಯವರು:-

i) ನಿರಂತರ ಸೇವೆ ಸಲ್ಲಿಸಿದ ನಿವೃತ್ತಿ ಹೊಂದಿದ ಪಿಂಚಣಿದಾರರು.

ii) ಮಿಲಿಟರಿ ಸೇವೆಯಿಂದಾಗಿ ಉಂಟಾದ ದೈಹಿಕ ಅಸಾಮರ್ಥ್ಯತೆ ಹೊಂದಿ ಬಿಡುಗಡೆಯಾದ ವ್ಯಕ್ತಿ.

iii) ಗ್ಯಾಲಂಟ್ರಿ ಪ್ರಶಸ್ತಿ ವಿಜೇತರು.

**<u>ವಿವರಣೆ:-</u>** ದಿನಾಂಕ 21-11-2001 ರಂದು ಕೇಂದ್ರ ಸಶಸ್ತ್ರ ದಳದಲ್ಲಿ ಸೇವೆಯಲ್ಲಿರುವ ವ್ಯಕ್ತಿಗಳು ಸೇವೆಯಿಂದ ನಿವೃತ್ತಿ ಹೊಂದಿದ ನಂತರ ಮಾಜಿ ಸೈನಿಕರ ವರ್ಗದಡಿ ಬರುವ ವ್ಯಕ್ತಿಗೆ ನಿರ್ದಿಷ್ಟ ಒಪ್ಪಂದವು ಪೂರ್ಣವಾಗಲು ಒಂದು ವರ್ಷಕ್ಕೆ ಮುನ್ನ ಪುನರ್ ಉದ್ಯೋಗಕ್ಕೆ ಅರ್ಜಿ ಹಾಕಿಕೊಳ್ಳಲು ಹಾಗೂ ಅವರಿಗೆ ಮಾಜಿ ಸೈನಿಕರಿಗೆ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಹೊಂದಲು ಅನುಮತಿ ನೀಡಲಾಗಿದೆ. ಆದರೆ ಸಮವಸ್ತ್ರವನ್ನು ತ್ಯಜಿಸಲು ಅನುಮತಿ ನೀಡುವವರೆಗೆ ರಾಜ್ಯ ನಾಗರೀಕ ಸೇವೆ ಅಥವಾ ಹುದ್ದೆಗೆ ನೇಮಕ ಹೊಂದುವಂತಿಲ್ಲ. ಇಂತಹವರು ಅರ್ಜಿ ಸಲ್ಲಿಸುವ ಮುನ್ನ ಸೇನೆಯಿಂದ ನಿರಾಕ್ಷೇಪಣಾ ಪತ್ರ ಪಡೆದು ಸಲ್ಲಿಸಬೇಕು. ಈ ಮೀಸಲಾತಿ ಕೋರುವ ಅಭ್ಯರ್ಥಿಗಳು ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಅದರ ಬಿಡುಗಡೆ ಪ್ರಮಾಣ ಪತ್ರವನ್ನು ತಪ್ಪದೇ ಹಾಜರುಪಡಿಸತಕ್ಕದ್ದು. ಮಾಜಿ ಸೈನಿಕ ಅವಲಂಬಿತರು ಮಾಜಿ ಸೈನಿಕರ ಪ್ರಮಾಣ ಪತ್ರ ಹಾಗೂ ಮಾಜಿ ಸೈನಿಕರು ಸೇವೆಯಲ್ಲಿರುವಾಗ ಮೃತ ಪಟ್ಟಿರುವ/ಶಾಶ್ವತವಾಗಿ ಅಂಗವಿಕಲತೆ ಹೊಂದಿರುವ ಬಗ್ಗೆ ಪ್ರಮಾಣ ಪತ್ರವನ್ನು ತಪ್ಪದೇ ಹಾಜರು ಪಡಿಸಬೇಕು.

**9. <u>ಅಂಗವಿಕಲ ಮೀಸಲಾತಿಯ ವಿವರಣೆ:–</u>**

ಅಂಗವಿಕಲ ಮೀಸಲಾತಿಯನ್ನು ಪಡೆಯಲು ಬಯಸುವವರು ಸರ್ಕಾರದ ಅಧಿಕೃತ ಜ್ಞಾಪನಾ ಪತ್ರದ ದಿನಾಂಕ 13.09.1995ರ ಅನುಸಾರ ಸಕ್ಷಮ ಪ್ರಾಧಿಕಾರದ ನೀಡಲ್ಪಟ್ಟ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು. ಸದರಿ ಪ್ರಮಾಣ ಪತ್ರದ ನಮೂನೆ ಇದರೊಂದಿಗೆ ನೀಡಲಾಗಿದೆ.

**10. ಯೋಜನಾ ನಿರ್ವಸಿತ ಮೀಸಲಾತಿಯ ವಿವರಣೆ:–**

ಸರ್ಕಾರದ ಅಧಿಸೂಚನೆ ಸಂಖ್ಯೆ.ಡಿಪಿಎಆರ್:23:ಎಸ್‌ಆರ್‌ಆರ್ 99 ದಿನಾಂಕ 23.11.2000ದ ಅನುಸಾರ ಯೋಜನಾ ನಿರ್ವಸಿತರಡಿಯಲ್ಲಿ ಮೀಸಲಾತಿಯನ್ನು ಪಡೆಯಲು ಬಯಸುವವರು ಸರ್ಕಾರದ ಸುತ್ತೋಲೆ ಸಂಖ್ಯೆ.ಡಿಪಿಎಆರ್:44:ಎಸ್‌ಆರ್‌ಆರ್:2001 ದಿನಾಂಕ 27.07.2001ರಡಿಯಲ್ಲಿ ನಿಗಧಿಪಡಿಸಿರುವ ನಮೂನೆಯಲ್ಲಿ ಸಕ್ಷಮ ಪ್ರಾಧಿಕಾರದಿಂದ ನೀಡಲ್ಪಟ್ಟ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು. ತಪ್ಪಿದಲ್ಲಿ ಮೀಸಲಾತಿ ಕೋರಿಕೆಯನ್ನು ಪರಿಗಣಿಸಲಾಗುವುದಿಲ್ಲ. ಸದರಿ ಪ್ರಮಾಣ ಪತ್ರದ ನಮೂನೆಯನ್ನು ಇದರೊಂದಿಗೆ ನೀಡಿದೆ.

ಆಯ್ಕೆಗೆ ಅರ್ಹತೆ ಹೊಂದುವ ಅಭ್ಯರ್ಥಿಗಳ ದಾಖಲೆಗಳನ್ನು ಪರಿಶೀಲಿಸಲು ಇಲಾಖೆಯು ನಿಗಧಿಪಡಿಸುವ ದಿನಾಂಕ ಹಾಗೂ ವೇಳೆಯನ್ನು ಹಾಗೂ ಅರ್ಹತೆ ಹೊಂದಿರುವ ಅಭ್ಯರ್ಥಿಗಳ ಅರ್ಜಿ ಸಂಖ್ಯೆಗಳನ್ನು ನೇಮಕಾತಿ ಪ್ರಾಧಿಕಾರದ ಕಛೇರಿಯ ಸೂಚನಾ ಫಲಕ ಹಾಗೂ ಇಲಾಖೆಯ ಅಂತರ್ಜಾಲ www.kpwd.gov.in ರಲ್ಲಿ ಪ್ರಕಟಿಸಲಾಗುವುದು.

**11. ಪ್ರಮುಖ ಸೂಚನೆಗಳು:–**

ಅಭ್ಯರ್ಥಿಯ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರವನ್ನು ಒಂದು ಹಾಳೆಯ ಮೇಲಿಟ್ಟು ಅದರ ಕೆಳಗೆ ಕಪ್ಪು ಶಾಹಿಯ ಸ್ಕೆಚ್/ಮಾರ್ಕರ್ ಪೆನ್ನಿನಲ್ಲಿ ಸಹಿಯನ್ನು ಸ್ಕ್ಯಾನ್ [SCAN] ಮಾಡಿ ಅರ್ಜಿಗೆ ಅಪ್‌ಲೋಡ್ ಮಾಡಬೇಕು. ಭಾವಚಿತ್ರ ಹಾಗೂ ಸಹಿಯನ್ನು ಅಪ್‌ಲೋಡ್ ಮಾಡದ ಅರ್ಜಿಗಳು ತಿರಸ್ಕೃತಗೊಳ್ಳುತ್ತವೆ. ಈ ಕೆಳಕಂಡ ಪ್ರಮಾಣ ಪತ್ರಗಳನ್ನು ನಿಗಧಿತ ನಮೂನೆಯಲ್ಲಿ ONLINE ಮೂಲಕ ಅರ್ಜಿ ಭರ್ತಿ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಸಂಬಂಧಪಟ್ಟ ಪ್ರಾಧಿಕಾರಿಗಳಿಂದ ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ಅದೇ ಮೀಸಲಾತಿ ಪ್ರಮಾಣ ಪತ್ರದ / ಇತರೇ ಪ್ರಮಾಣ ಪತ್ರಗಳ ಮೂಲ ಪ್ರತಿಯನ್ನು ಮೂಲ ದಾಖಲಾತಿಯ ಪರಿಶೀಲನೆಗೆ ಅರ್ಹರಾದಾಗ ಆ ಸಮಯದಲ್ಲಿ ಪರಿಶೀಲನೆಗೆ ಹಾಜರುಪಡಿಸಬೇಕು. ತಪ್ಪಿದ್ದಲ್ಲಿ ಇವರ ಮೀಸಲಾತಿಯನ್ನು ತಿರಸ್ಕರಿಸಲಾಗುವುದು / ಅಭ್ಯರ್ಥಿತ್ವವನ್ನು ಅನರ್ಹಗೊಳಿಸಲಾಗುವುದು.

1) ದಿನಾಂಕ 21-11-2001 ರಂದು ಹುದ್ದೆಗಳಿಗೆ ನಿಗಧಿಪಡಿಸಲಾದ ವಿದ್ಯಾರ್ಹತೆಯ ಪಡೆದ ಎಲ್ಲಾ ವರ್ಷಗಳ/ ಸೆಮಿಸ್ಟರ್‌ಗಳ ಅಂಕಪಟ್ಟಿಗಳು ಹಾಗೂ ಘಟಿಕೋತ್ಸವದ ಪ್ರಮಾಣ ಪತ್ರಗಳು/ಗ್ರೇಡ್‌ನ್ನು ಶೇಕಡವಾರು ಅಂಕಗಳಿಗೆ ಪರಿವರ್ತಿಸಿದ ಪ್ರಮಾಣ ಪತ್ರ.
2) ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ/ ಶಾಲೆಯ ವರ್ಗಾವಣೆ ಪ್ರಮಾಣ ಪತ್ರ / ಜನನ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉದ್ಧೃತ ಭಾಗ.
3) ನಿರಾಕ್ಷೇಪಣಾ ಪತ್ರ (ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳಿಗೆ)
4) ಸೈನಿಕ ಸೇವೆಯಿಂದ ಬಿಡುಗಡೆಯಾದ ಪ್ರಮಾಣ ಪತ್ರ ಮತ್ತು ಪಿಂಚಣಿ / ಗ್ರಾಚ್ಯುಟಿ ಪಡೆಯುತ್ತಿರುವ ಪ್ರಮಾಣ ಪತ್ರ / ಮಾಜಿ ಸೈನಿಕ ಅವಲಂಬಿತರಾಗಿದ್ದಲ್ಲಿ, ಮಾಜಿ ಸೈನಿಕರು ಸೇವೆಯಲ್ಲಿರುವಾಗ ಮೃತಪಟ್ಟಿದ್ದಲ್ಲಿ ಅಥವಾ ಖಾಯಂ ಆಗಿ ಗಾಯಗೊಂಡಿರುವ ಪ್ರಮಾಣ ಪತ್ರ (ಮಾಜಿ ಸೈನಿಕ ಮೀಸಲಾತಿ ಕೋರಿದ್ದಲ್ಲಿ)
5) ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ ಮೀಸಲಾತಿ ಪ್ರಮಾಣ ಪತ್ರ ಪ್ರಸ್ತುತ ಚಾಲ್ತಿಯಲ್ಲಿರುವ ನಮೂನೆಯಲ್ಲಿ ಅಥವಾ ಈ ಹಿಂದೆ ಪಡೆಯಲಾದ ಮೀಸಲಾತಿ ಪ್ರಮಾಣ ಪತ್ರ. ಕೇಂದ್ರ ಸರ್ಕಾರದ ಅಥವಾ ಇತರೆ ರಾಜ್ಯ ಸರ್ಕಾರದ ನೇಮಕಾತಿಗಳಿಗಾಗಿ ಪಡೆಯಲಾದ ಮೀಸಲಾತಿ ಪ್ರಮಾಣಪತ್ರಗಳನ್ನು ಪರಿಗಣಿಸಲಾಗುವುದಿಲ್ಲ.
6) ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ-2 ರಲ್ಲಿ(ಮೀಸಲಾತಿ ಕೋರಿದ್ದಲ್ಲಿ)

12. ವಿಶೇಷ ಸೂಚನೆಗಳು:–

(1) **ONLINE** ಮೂಲಕ ಅರ್ಜಿ ಸಲ್ಲಿಸುವಾಗ ಎಲ್ಲಾ ಮಾಹಿತಿಗಳನ್ನು ಸರಿಯಾಗಿ ಭರ್ತಿ ಮಾಡಿರುವ ಬಗ್ಗೆ ಖಚಿತಪಡಿಸಿಕೊಂಡು ನಂತರ ಅದರ ಒಂದು ಪ್ರತಿಯನ್ನು ಡೌನ್‌ಲೋಡ್ ಮಾಡಿಕೊಂಡು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ಭದ್ರವಾಗಿ ತೆಗೆದಿಟ್ಟುಕೊಂಡಿರತಕ್ಕದ್ದು.

(2) ಈಗಾಗಲೇ ಸೇವೆಯಲ್ಲಿರುವ/ಸೇವೆ ಸಲ್ಲಿಸಿದ ಅಭ್ಯರ್ಥಿಗಳು ಅವರುಗಳ ನೇಮಕಾತಿ ಪ್ರಾಧಿಕಾರಿಗಳಿಂದ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗ ಅನುಮತಿಯನ್ನು/ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ವಿವರಗಳನ್ನು ಅರ್ಜಿಯಲ್ಲಿ ನಮೂದಿಸತಕ್ಕದ್ದು ಮತ್ತು ಇದೇ ಪ್ರಮಾಣ ಪತ್ರದ ಮೂಲಪ್ರತಿಯನ್ನು ಮೂಲ ಪರಿಶೀಲನೆಯ ಸಮಯದಲ್ಲಿ ಹಾಜರುಪಡಿಸತಕ್ಕದ್ದು ತಪ್ಪಿದ್ದಲ್ಲಿ ಅನರ್ಹಗೊಳಿಸಲಾಗುವುದು.

(3) ದಿನಾಂಕ 24-05-2005ರ ವಿಶೇಷ ವಿಲೀನಾತಿ ನಿಯಮಾವಳಿಯಲ್ಲಿ ವಿಲೀನಗೊಂಡ ಅಭ್ಯರ್ಥಿಗಳು ವಿಲೀನಾತಿ ಆದೇಶದ ಪ್ರತಿಯನ್ನು ಪರಿಶೀಲನಾ ಸಮಯದಲ್ಲಿ ಸಲ್ಲಿಸತಕ್ಕದ್ದು.

**13. ದುರ್ನಡತೆ:** ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆ ಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಮೂಲ ದಾಖಲಾತಿಗಳ ಪರಿಶೀಲನಾ ಸಮಯದಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವನೆಂದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು, ಕಂಡುಬಂದಲ್ಲಿ ಅವನು/ಅವಳು ಸ್ವತ: ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ, ಹುದ್ದೆಯ ಆಯ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.

**ಅಧ್ಯಕ್ಷರು,**
ಕಿರಿಯ ಇಂಜಿನಿಯರ್(ಬ್ಯಾಕ್‌ಲಾಗ್)ಗಳ ನೇಮಕಾತಿ ಪ್ರಾಧಿಕಾರ,
ಮತ್ತು ಮುಖ್ಯ ಇಂಜಿನಿಯರ್,
ಸಂಪರ್ಕ ಮತ್ತು ಕಟ್ಟಡಗಳು(ದ), ಬೆಂಗಳೂರು.

(ಪ.ಜಾ / ಪ.ಪಂ ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

ನಮೂನೆ - ಡಿ

(ನಿಯಮ 3ಎ (2) (3) ನೋಡಿ)

1. ಅನುಸೂಚಿತ ಜಾತಿ ಅಥವಾ ಅನುಸೂಚಿತ ಬುಡಕಟ್ಟುಗಳಿಗೆ (ಪ.ಜಾ/ಪ.ಪಂ) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರಗಳ ನಮೂನೆ ಪ್ರಮಾಣ ಪತ್ರ

.................................................... ರಾಜ್ಯದ / ಕೇಂದ್ರಾಡಳಿತ ಪ್ರದೇಶದ * ................................ ಜಿಲ್ಲೆಯ / ವಿಭಾಗದ ............................................. ಗ್ರಾಮ / ಪಟ್ಟಣದ * ನಿವಾಸಿಯಾದ ಶ್ರೀ / ಶ್ರೀಮತಿ ................................ ಎಂಬುವವರ ಮಗ / ಮಗಳಾದ ಶ್ರೀ / ಶ್ರೀಮತಿ ................................ ಇವರು ಅನುಸೂಚಿತ ಜಾತಿ/ಅನುಸೂಚಿತ ಬುಡಕಟ್ಟು * ಎಂದು ಮಾನ್ಯ ಮಾಡಲಾಗಿರುವ ಜಾತಿ/ಬುಡಕಟ್ಟಿಗೆ * ಸೇರಿರುತ್ತಾರೆಂದು ಪ್ರಮಾಣಿಕರಿಸಿದೆ.

☐ ಸಂವಿಧಾನ (ಅನುಸೂಚಿತ ಜಾತಿಗಳು) ಆದೇಶ, 1950
☐ ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) ಆದೇಶ, 1950
☐ ಸಂವಿಧಾನ (ಅನುಸೂಚಿತ ಜಾತಿ) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1950
☐ ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1951

(ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ ಪಟ್ಟಿ (ಮಾರ್ಪಾಡು) ಆದೇಶ 1956, ಮುಂಬಯಿ ತಾಜ್ಯ ಪುನರ್ ರಚನಾ ಅಧಿನಿಯಮ, 1960, ಪಂಜಾಬ್ ರಾಜ್ಯ ಪುನರ್ ರಚನಾ ಅಧಿನಿಯಮ, 1966, ಹಿಮಾಚಲ ಪ್ರದೇಶ ರಾಜ್ಯ ಅಧಿನಿಯಮ, 1970 ಮತ್ತು ಈಶಾನ್ಯ ಪ್ರದೇಶಗಳ (ಪುನರ್ ರಚನಾ ಅಧಿನಿಯಮ, 1971ರ ಮೂಲ ತಿದ್ದುಪಡಿಯಾದಂತೆ)

☐ ಸಂವಿಧಾನ
☐ ಸಂವಿಧಾನ (ಜಮ್ಮು ಮತ್ತು ಕಾಶ್ಮೀರ) ಅನುಸೂಚಿತ ಜಾತಿಗಳ ಆದೇಶ, 1956
☐ ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ (ತಿದ್ದುಪಡಿ) ಅಧಿನಿಯಮ, 1976ರ ಮೂಲಕ ತಿದ್ದುಪಡಿಯಾದಂತೆ ಸಂವಿಧಾನ (ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳ) ಅನುಸೂಚಿತ ಬುಡಕಟ್ಟುಗಳ ಆದೇಶ, 1959.
☐ ಸಂವಿಧಾನ (ದಾದರ್ ಮತ್ತು ನಾಗರಹವೇಲಿ) ಅನುಸೂಚಿತ ಜಾತಿಗಳ ಆದೇಶ 1962
☐ ಸಂವಿಧಾನ (ಪಾಂಡಿಚೇರಿ) ಅನುಸೂಚಿತ ಜಾತಿಗಳ ಆದೇಶ, 1964
☐ ಸಂವಿಧಾನ (ಅನುಸೂಚಿತ ಬುಡಕಟ್ಟುಗಳ) (ಉತ್ತರ ಪ್ರದೇಶ) ಆದೇಶ, 1967
☐ ಸಂವಿಧಾನ (ಗೋವಾ, ದಮನ್ ಮತ್ತು ದೀವ್) ಅನುಸೂಚಿತ ಜಾತಿ/ಬುಡಕಟ್ಟುಗಳ ಆದೇಶ 1988
☐ ಸಂವಿಧಾನ (ನಾಗಾಲ್ಯಾಂಡ್) ಅನುಸೂಚಿತ ಬುಡಕಟ್ಟುಗಳ ಆದೇಶ

2. ಶ್ರೀ/ಶ್ರೀಮತಿ/ಕುಮಾರಿ * ............................................................__________ಮತ್ತು / ಅಥವಾ ಅವನ* / ಅವಳ* ಕುಟುಂಬವು ................................................................................................ರಾಜ್ಯ / ಕೇಂದ್ರಾಡಳಿತ ಪ್ರದೇಶದ ................................................. ಜಿಲ್ಲಾ / ವಿಭಾಗದ .........................................ಗ್ರಾಮ / ಪಟ್ಟಣದ ಸಾಮಾನ್ಯ ನಿವಾಸಿ (ಗಳು)

ಸಹಿ...........................................................
ತಹಶೀಲ್ದಾರ್..........................................
ಸ್ಥಳ : ಪದನಾಮ
ದಿನಾಂಕ: ಕಛೇರಿಯ ಮೊಹರಿನೊಂದಿಗೆ

ರಾಜ್ಯ / ಕೇಂದ್ರಾಡಳಿತ ಪ್ರದೇಶ *

* ಅನ್ವಯವಾಗದಿರುವ ಪದಗಳನ್ನು ದಯವಿಟ್ಟು ಬಿಟ್ಟು ಬಿಡಿ / ಹೊಡೆದು ಹಾಕಿ

ಸೂಚನೆ: ಇಲ್ಲಿ ಉಪಯೋಗಿಸಿದ ಸಾಮಾನ್ಯ ನಿವಾಸಿಗಳು ಎಂಬ ಪದಾವಳಿಯು ಪ್ರಜಾ ಪ್ರಾತಿನಿಧ್ಯ ಅಧಿನಿಯಮ, 1950ರ 20ನೇ ಪ್ರಕರಣದಲ್ಲಿರುವ ಅರ್ಥವನ್ನೇ ಹೊಂದಿರುತ್ತದೆ.

ಭಾರತ ಸರ್ಕಾರದ ಪತ್ರ ಸಂಖ್ಯೆ: ಬಿಸಿ 12028/2/76-ಎಸ್‌ಸಿಟಿ-1 ಗೃಹ ಮಂತ್ರಾಲಯ ಅನುಸಾರವಾಗಿ, ಅಂಥ ಪ್ರಮಾಣ ಪತ್ರಗಳನ್ನು ನೀಡಲು ಸಕ್ಷಮವಾಗಿರುವುದಕ್ಕಾಗಿ, ಭಾರತ ಸರ್ಕಾರದ (ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ) ಪತ್ರ ಸಂಖ್ಯೆ:13-2-74 ಇಎಸ್‌ಟಿ (ಎಸ್‌ಸಿಟಿ) ದಿನಾಂಕ: 05.08.1975ರಲ್ಲಿ ನಮೂದಿಸಿದ ಪ್ರಾಧಿಕಾರಿಯು, ರಾಷ್ಟ್ರಪತಿಗಳು ಸಂಬಂಧಪಟ್ಟ ಆದೇಶದ ಅಧಿಸೂಚನೆಯನ್ನು ಹೊರಡಿಸಿದ ಸಮಯದಲ್ಲಿ ಪ್ರಮಾಣ ಪತ್ರಕ್ಕಾಗಿ ಅರ್ಜಿ ಸಲ್ಲಿಸಿದ ವ್ಯಕ್ತಿಯು, ತನ್ನ ಖಾಯಂ ವಾಸ ಸ್ಥಳವನ್ನು ಹೊಂದಿದ್ದ ಸ್ಥಳಕ್ಕೆ ಸೇರಿದವರೊಬ್ಬರಾಗಿರತಕ್ಕದ್ದು. ಅದೇ ರೀತಿಯಲ್ಲಿ ಒಂದು ತಾಲ್ಲೂಕಿನ ರೆವಿನ್ಯೂ ಪ್ರಾಧಿಕಾರಿಯು ಇನ್ನೊಂದು ತಾಲ್ಲೂಕಿಗೆ ಸೇರಿದ ವ್ಯಕ್ತಿಗಳಿಗೆ ಸಂಬಂಧಪಟ್ಟ ಪ್ರಮಾಣ ಪತ್ರವನ್ನು ನೀಡಲು ಸಕ್ಷಮ ಪ್ರಾಧಿಕಾರಿಯಾಗುವುದಿಲ್ಲ.

ನಮೂನೆ

ಗ್ರಾಮೀಣ ಅಭ್ಯರ್ಥಿ ಪ್ರಮಾಣ ಪತ್ರ

ಶ್ರೀ/ಶ್ರೀಮತಿ ರವರ ಮಗ/ ಮಗಳು/ ಪತಿ/ ಪತ್ನಿ/ ಶ್ರೀ/ಶ್ರೀಮತಿ/ಕುಮಾರಿ ಜಿಲ್ಲೆ ತಾಲ್ಲೂಕು ಗ್ರಾಮದಲ್ಲಿ ವಾಸವಾಗಿರುವ ಇವರು ಒಂದನೇ ತರಗತಿಯಿಂದ ತರಗತಿಯವರೆಗೆ ಜಿಲ್ಲೆ ತಾಲ್ಲೂಕು ಪಟ್ಟಣ ಶಾಲೆಯಲ್ಲಿ ವ್ಯಾಸಂಗ ಮಾಡಿ ವರ್ಷ ನಡೆದ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುತ್ತಾರೆ. ಈ ಶಾಲೆಯು ಅಭ್ಯರ್ಥಿಯು ವ್ಯಾಸಂಗ ಮಾಡಿದ ಅವಧಿಯಲ್ಲಿ ಕರ್ನಾಟಕ ಪೌರ ನಿಗಮಗಳ ಅಧಿನಿಯಮ, 1976 ಅಥವಾ ಕರ್ನಾಟಕ ಪೌರ ಸಭೆಗಳ ಅಧಿನಿಯಮ 1964ರ ಅಡಿಯಲ್ಲಿ ನಿರ್ದಿಷ್ಟಪಡಿಸಿ ಒಂದು ದೊಡ್ಡ ನಗರ ಪ್ರದೇಶ ಸಣ್ಣ ನಗರ ಪ್ರದೇಶ ಅಥವಾ ಪರಿವರ್ತನೆ ಹಂತದಲ್ಲಿರುವ ಪ್ರದೇಶಗಳ ಹೊರತಾದ ಪ್ರದೇಶದಲ್ಲಿತ್ತು.

ಮೇಲು ರುಜು<br>
ಕ್ಷೇತ್ರ ಶಿಕ್ಷಣ ಅಧಿಕಾರಿ<br>
ಕಛೇರಿಯ ಮೊಹರು

ಸಹಿ/–<br>
ಮುಖ್ಯೋಪಾಧ್ಯಾಯರ ಸಹಿ<br>
ಮತ್ತು ಸಂಸ್ಥೆಯ ಮೊಹರು

ಸ್ಥಳ :<br>
ದಿನಾಂಕ :

---

Form

Physically handicapped Certificate

Certify that I/We have examined Shri/Smt……………………………………Son/Daughter /Wife of ……………………………………… a candidate of registration at the Employment Exchange/ for Appointment to the post of………………………………in the Department. I/We consider that Sri/Smt/Kum…………………………………shall be deemed to be Physically Handicapped person within the meaing of Clause (2) of Sub-rule (1) of Rule 2 of the Karnataka Civil Services(General) Recruitment Rules 1977 as :

1. Suffers from absence of sight.
2. Visual acuity not exceeding 6/60 of 20/200(Snellen) in the better eye with concealing lenses.
3. Limitation of field of vision subtending a angle of 20 degree of
   a) Physical Diagnosis
   b) Percentage of Disability

1. Sound of hearing is non-functional for the ordinary purpose of life.
2. Does not hearer understand sound at all, even with Amplified speech.
3. Hearing loss is more than 70 decibels in the better ear (Profound impairment) or total loss or hearing in both ears.
   a) Physical Diagnosis
   b) Percentage of Disability

1. His /Her Physical defect or deformity which causes an interference with normal functioning of the bones, muscles and joints.
   a) Physical Diagnosis
   b) Percentage of Disability
   c) Permanent/Temp/Partial/Upper/Lower/Limb/Both

Note: strike out the categories which are not applicable.

Signature of the applicant. Signature of the Medical Authority with Seal.

Place:<br>
Date:

Note: The Physical Disability of limbs is to evaluated by the Orthopedic Surgeon on the basis of Standard of evaluation as per the book published by A.Limco Kanpur (W.H.O Standard).

<u>ಅನುಬಂಧ –1</u>

<u>ನಮೂನೆ – 1</u>

**ಯೋಜನೆಗಳಿಂದ ನಿರ್ವಸಿತರಾದ ಕುಟುಂಬ ಅಭ್ಯರ್ಥಿ ಪ್ರಮಾಣ ಪತ್ರ**

ಶ್ರೀ/ಶ್ರೀಮತಿ ರವರ ಮಗ/ ಮಗಳು/ಪತಿ/ ಪತ್ನಿ/ ಶ್ರೀ/ಶ್ರೀಮತಿ/ಕುಮಾರಿ ಜಿಲ್ಲೆ ತಾಲ್ಲೂಕು ಗ್ರಾಮದಲ್ಲಿ ವಾಸವಾಗಿರುವ ಇವರು : ಇವರ ಕುಟುಂಬದವರು ಅವಲಂಬಿತರಾಗಿದ್ದ ಈ ಕೆಳಕಂಡ ಆಸ್ತಿಯನ್ನು .ಯೋಜನೆಗಾಗಿ .ಇಸವಿಯಂದು ಸ್ವಾಧೀನಪಡಿಸಿಕೊಳ್ಳಲಾಗಿದೆ ಎಂದು ಈ ಮೂಲಕ ಪ್ರಮಾಣೀಕರಿಸಿದೆ.

1.ವಾಸಿಸುವ ಮನೆ ಮತ್ತು ತಾವು ಅವಲಂಬಿತರಾಗಿದ್ದ ಅವರ ಕೃಷಿ ಭೂಮಿಯ ಅರ್ಧದಷ್ಟು
2.ಯೋಜನೆಗೆ ಮೊದಲು ಭೂಮಿಯನ್ನು ಹೊಂದಿರದೆ, ಯೋಜನೆಯಿಂದ ತಾವು ವಾಸಿಸುತ್ತಿದ್ದ ಮನೆ.
3.ತಾವು ಅವಲಂಬಿತರಾಗಿದ್ದ ತಮ್ಮ ಕೃಷಿ ಭೂಮಿಯ ಅರ್ಧದಷ್ಟು ಅಥವಾ ಅದಕ್ಕಿಂತ ಕಡಿಮೆ ಕೃಷಿ ಭೂಮಿ
4.ಇತರ ಇನ್ನಾವುದೇ ಪ್ರಕರಣದಲ್ಲಿ ಯೋಜನೆಯಿಂದ ನಿರ್ವಸಿತರಾದವರು.

ತಹಸೀಲ್ದಾರ್

ತಾಲ್ಲೂಕು.

ಅನ್ವಯವಾಗುವ ಐಟಂನ್ನು ಮಾತ್ರ ಪ್ರಮಾಣ ಪತ್ರದಲ್ಲಿ ನಮೂದಿಸತಕ್ಕದ್ದು.

---

<u>ರಾಜ್ಯ ಸರ್ಕಾರಿ / ಕೇಂದ್ರ ಸರ್ಕಾರಿ ನೌಕರರು ಒದಗಿಸಬೇಕಾದ ಪ್ರಮಾಣ ಪತ್ರ</u>

ಶ್ರೀ / ಶ್ರೀಮತಿ________________________________ರವರು ರಾಜ್ಯ / ಕೇಂದ್ರ ಸರ್ಕಾರದಲ್ಲಿ------------------------------------------ - ____________________(ಪದನಾಮ)______________ ------------------ --__________________________________ಇಲಾಖೆಯಲ್ಲಿ ಖಾಯಂ/ ತಾತ್ಕಾಲಿಕ ಹುದ್ದೆಯನ್ನು ದಿನಾಂಕ .______________ರಿಂದ ____________________ ರವರೆಗೆ ಹೊಂದಿರುವರು. ಈ ಹುದ್ದೆಗೆ ಇವರು ನೇಮಕಾತಿ ನಿಯಮಗಳಡಿ ಆಯ್ಕೆಯಾಗಿದ್ದು, ಸದರಿ ಹುದ್ದೆಗೆ ಅರ್ಜಿ ಸಲ್ಲಿಸಲು ಅವರಿಗೆ ಅನುಮತಿ ನೀಡಲಾಗಿದೆ.

ಸ್ಥಳ:

ದಿನಾಂಕ : ನೇಮಕಾತಿ ಪ್ರಾಧಿಕಾರದ ಸಹಿ/

ಇಲಾಖೆಯ ಹೆಸರು ಮತ್ತು ಮೊಹರುನೊಂದಿಗೆ

---

<u>CERTIFICATE TO BE FURNISHED BY THE STATE / CENTRAL GOVT. SERVANTS</u>

Certified that Sri / Smt ..........................................................holds a permanent / temporary post under the State / Central Govt. as.......................................... (Designation) in the dept. of .................................................from ............................having been appointed therein under the rules of recruitment. He /She is permitted to apply for the said post.

Place : Signature of the appointing authority

Date: of the department / with name and seal.